**MARCH 31,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

‘ರಂಜಾನ್’ ಮಾಸವಿಡೀ ಶ್ರದ್ಧೆಯಿಂದ ಧಾರ್ಮಿಕ ಕಾರ್ಯಗಳನ್ನು ನೆರವೇರಿಸಿದ ಮುಸ್ಲಿಂ ಬಾಂಧವರು, ಇಂದು ಶ್ರದ್ಧಾ, ಭಕ್ತಿ ಹಾಗೂ ಸಂಭ್ರಮದಿಂದ, ಕುತುಬ್–ಎ–ರಂಜಾನ್, ಈದ್–ಉಲ್–ಫಿತರ್ ಆಚರಿಸಿದರು. ಹುಬ್ಬಳ್ಳಿಯ ಚನ್ನಮ್ಮ ವೃತ್ತ, ಹಳೇ ಹುಬ್ಬಳ್ಳಿ, ಕಾರವಾರ ರಸ್ತೆಯ ಈದ್ಗಾ ಮೈದಾನ ಹಾಗೂ ಧಾರವಾಡದ ಗುಲಗಂಜಿಕೊಪ್ಪದ ಈದ್ಗಾ ಮೈದಾನ ಸೇರಿದಂತೆ, ರಾಜ್ಯದೆಲ್ಲೆಡೆ ಸಾಮೂಹಿಕ ಪ್ರಾರ್ಥನೆ ನಡೆಯಿತು. ಗಣ್ಯರು ಶುಭಾಶಯ ಕೋರಿದ್ದಾರೆ. ಮುಸ್ಲಿಂ ಧರ್ಮ ಗುರು ಮೌಲಾನಾ ನಯಾಜ್ ಆಲಂ ಶೇಖ್ ಮಾತನಾಡಿ, ಎಲ್ಲ ಧರ್ಮ, ಜಾತಿ, ಸಮುದಾಯದವರೂ ಪರಸ್ಪರ ಪ್ರೀತಿ, ಸೌಹಾರ್ದ ಹಾಗೂ ಭ್ರಾತೃತ್ವ ಭಾವದಿಂದ, ದೇಶದ ಏಳಿಗೆಗಾಗಿ ಒಗ್ಗಟ್ಟಿನಿಂದ ಬಾಳುವಂತಾಗಲಿ ಎಂದು, ಪ್ರಾರ್ಥಿಸಿರುವುದಾಗಿ, ಆಕಾಶವಾಣಿಗೆ ತಿಳಿಸಿದ್ದಾರೆ.

<><><>

ರಂಜಾನ್ ಹಬ್ಬದ ಹಿನ್ನಲೆಯಲ್ಲಿ, ಚಿತ್ರದುರ್ಗ ನಗರದ ಈದ್ಗಾ ಮೈದಾನ ಹಾಗೂ ವಿವಿಧ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ನೆರವೇರಿತು.ಮುಸ್ಲಿಂ ಬಾಂಧವರು ಪರಸ್ಪರ ಶುಭಾಶಯಗಳನ್ನು ವಿನಿಯಮ ಮಾಡಿಕೊಂಡರು.

<><><>

ವಿಜಯಪುರದ ಜೋಡು ಗುಮ್ಮಟ, ಜುಮ್ಮಾ ಮಸೀದಿ, ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ನಡೆಯಿತು. ದಖನಿ ಮೈದಾನದಲ್ಲಿ ಜರುಗಿದ ಪ್ರಾರ್ಥನೆಯಲ್ಲಿ ರಾಜ್ಯ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವರಾದ ಎಂ.ಬಿ ಪಾಟೀಲ್ ಪಾಲ್ಗೊಂಡರು.

<><><>

ನಾಡಿನ ಸಮಸ್ತ ಮುಸ್ಲಿಂ ಬಾಂಧವರಿಗೆ, ಪವಿತ್ರ ರಂಜಾನ್ ಮಾಸಾಚರಣೆ ಹಾಗೂ ಹಬ್ಬದ ಶುಭಾಶಯವನ್ನು ಕೋರಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ದ್ವೇ ಾಸೂಯೆಗಳನ್ನು ಸುಟ್ಟು ಪ್ರೀತಿ, ಬಾಂಧವ್ಯಗಳನ್ನು ಬೆಸೆಯುವ ಪವಿತ್ರ ಈದ್ – ಉಲ್ – ಫಿತ್ರ್ ಹಬ್ಬದ ಸಂದೇಶ ಮನುಕುಲದ ಹಾದಿಗೆ ದಾರಿದೀಪವಾಗಲಿ, ನಾಡಲ್ಲಿ ಸುಖ, ಶಾಂತಿ, ಸಮೃದ್ಧಿ ನೆಲೆಸಲಿ ಎಂದು ಹಾರೈಸಿದ್ದಾರೆ.

<><><>

ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಮುಸ್ಲಿಂ ಬಾಂಧವರಿಗೆ ಹಬ್ಬದ ಶುಭಾಶಯಗಳನ್ನು ತಿಳಿಸಿದ್ದಾರೆ. ತ್ಯಾಗ, ಪ್ರೀತಿ, ಸೌಹಾರ್ದತೆಯ ಸಂಕೇತವಾದ ಈ ಹಬ್ಬವು ಎಲ್ಲರಿಗೂ ಸುಖ ಹಾಗೂ ಸಂತೋಷ ನೀಡಲಿ ಎಂದಿದ್ದಾರೆ.

<><><>

ಸಾರ್ವಜನಿಕ ಸಹಭಾಗಿತ್ವ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಕಾರದೊಂದಿಗೆ , ಗದಗ ಜಿಲ್ಲೆಯಲ್ಲಿನ ವಿವಿಧ ಕೆರೆಗಳ ಪುನಶ್ಚೇತನದ ಬಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮನ ಕಿ ಬಾತ್ ನಲ್ಲಿ ಉಲ್ಲೇಖಿಸಿದ್ದಾರೆ. ಗದಗ ಜಿಲ್ಲೆಯ ಬೆಳಹೊಡ ಗ್ರಾಮದಲ್ಲಿ ಒಟ್ಟು ಆರು ಎಕರೆ ವ್ಯಾಪ್ತಿಯ ಬೃಹತ್ ಕೆರೆಯ ಹೂಳೆತ್ತುವ ಕಾರ್ಯವು ಭರದಿಂದ ಸಾಗಿದೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಬೆಳಹೊಡ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ದಾವಲಸಾಬ್ ಬಾಬೂಸಾಬ್ ಹಿತ್ತಲಮನಿ ಅವರು....

<><><>

ಬೈಟ್: ದಾವಲಸಾಬ್ ಬಾಬೂಸಾಬ್ ಹಿತ್ತಲಮನಿ 38 ಸೆಕೆಂದುಗಳು

<><><>

ಯಾದಗಿರಿ ಜಿಲ್ಲೆ, ಹುಣಸಗಿ ತಾಲೂಕು, ಬಸವಸಾಗರ ಜಲಾಶಯದ ನಾರಾಯಣಪುರ ಎಡದಂಡೆ ಕಾಲುವೆಗೆ, ರೈತರ ಹಿತದೃಷ್ಟಿಯಿಂದ 3 ಟಿ.ಎಂ.ಸಿ. ನೀರು ಹರಿಸಲು, ಕ್ರಮ ಕೈಗೊಳ್ಳಲಾಗುವುದು ಎಂದು, ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಭರವಸೆ ನೀಡಿದ್ದಾರೆ. ಶಹಾಪುರದಲ್ಲಿ ಮಾತನಾಡಿದ ಸಚಿವರು, ಮುಖ್ಯಮಂತ್ರಿ ಹಾಗೂ ನೀರಾವರಿ ಸಚಿವರಿಗೆ ತಾವು ಮನವಿ ಮಾಡಿದ್ದಾಗಿ, ತಿಳಿಸಿದರು.

<><><>

ಈ ಮಧ್ಯೆ, ರಾಯಚೂರು ಜಿಲ್ಲೆಯ, ಕೃಷ್ಣ ನದಿ ಪಾತ್ರದ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ, ಮುಂಜಾಗ್ರತೆ ವಹಿಸಲಾಗುವುದು ಎಂದು, ಜಿಲ್ಲಾ ಪಂಚಾಯ್ತಿ ಸಿ.ಇ.ಓ. ತಿಳಿಸಿದ್ದಾರೆ.

<><><>

ನಿರ್ಮಿತಿ ಕೇಂದ್ರ, ನಿರ್ಮಾಣ ಹಾಗೂ ತಾಂತ್ರಿಕತೆಯಲ್ಲಿ ಮಹತ್ವದ ಕೊಡುಗೆ ನೀಡಿದೆ. ತಂತ್ರಜ್ಞಾನ ಆಧಾರಿತ, ಕಟ್ಟಡ ನಿರ್ಮಾಣ ವಸ್ತುಗಳ ಆವಿಷ್ಕಾರ-ತಯಾರಿಕೆ-ಬಳಕೆಗೆ, ನಿರ್ಮಿತಿ ಕೇಂದ್ರ ಹೆಚ್ಚು ಒತ್ತು ನೀಡಿದೆ ಎಂದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ, ಶ್ಲಾಘಿಸಿದ್ದಾರೆ.ಕೇಂದ್ರ ಸರ್ಕಾರ, ಹುಡ್ಕೋ ಮತ್ತು ರಾಜ್ಯ ನಿರ್ಮಿತಿ ಕೇಂದ್ರದ ವತಿಯಿಂದ, ಬೆಳಗಾವಿ ಹೊರ ವಲಯದ, ಗಣೇಶಪುರದಲ್ಲಿ ನಿರ್ಮಿಸಲಾಗಿರುವ, ಜಿಲ್ಲಾ ನಿರ್ಮಿತಿ ಕೇಂದ್ರದ, ನೂತನ ಕಟ್ಟಡ ಉದ್ಘಾಟಿಸಿ, ಅವರು ಮಾತನಾಡಿದರು. ನಿರ್ಮಿತಿ ಕೇಂದ್ರ ಬೆಳಗಾವಿ ಜಿಲ್ಲೆಯ ಹಲವು ಪ್ರಮುಖ ಸರ್ಕಾರಿ ಕಟ್ಟಡಗಳನ್ನು ರೂಪಿಸಿದ ಹಿರಿಮೆ ಹೊಂದಿದೆ ಎಂದರು.

<><><>

ವಿಜಯಪುರ ಜಿಲ್ಲೆಯಲ್ಲಿ, 250 ಕೋಟಿ ರೂಪಾಯಿ ಮೊತ್ತದ #KSDL ಕರ್ನಾಟಕ ರಾಜ್ಯ ಮಾರ್ಜಕ ನಿಯಮಿತ ಅಧೀನದಲ್ಲಿ, ಮೈಸೂರು ಸ್ಯಾಂಡಲ್ ಸೋಪ್, ಉತ್ಪಾದನಾ ಘಟಕ ಸ್ಥಾಪನೆಯಾಗಲಿದೆ ಎಂದು ರಾಜ್ಯ ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯದ ವಿವಿಧ ಭಾಗಗಳಲ್ಲಿ ಒಟ್ಟು 3,500 ಕೋಟಿ 86 ಲಕ್ಷ ರೂಪಾಯಿ ಹೂಡಿಕೆಗೆ ಸಂಬಂಧಿಸಿದ 69

ಯೋಜನಾ ಪ್ರಸ್ತಾವನೆಗಳಿಗೆ, ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಒಪ್ಪಿಗೆ ನೀಡಿದೆ ಎಂದು ಅವರು ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>